ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ ದಿನಾಂಕ : DATE : 1/11/2019

# ನೀತಿ ಸಂಹಿತೆ ಉಲ್ಲಂಘನೆ: ಶಾಸಕ ಯತ್ನಾಳ ಖುಲಾಸೆ

ವಿಜಯಪುರ: ಸೂಕ್ತ ಸಾಕ್ಷ್ಯಾಧಾರ ಇಲ್ಲದ ಕಾರಣ ಚುನಾವಣಾ ನೀತಿ ಸಂಹಿತೆ ಉಲ್ಲಂಘನೆ ಪ್ರಕರಣದಲ್ಲಿ ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಖುಲಾಸೆಗೊಂಡಿದ್ದಾರೆ.

ಬೆಂಗಳೂರು ಸಿಟಿ ಸಿವಿಲ್ ಕೋರ್ಟ್ ನ್ಯಾಯಾಲಯದಲ್ಲಿ 2018ರ ವಿಧಾನಸಭೆ ಚುನಾವಣೆ ವೇಳೆ ನಾಮಪತ್ರ ಸಲ್ಲಿಸುವ ಮೆರವಣಿಗೆ ವೇಳೆ ಆರತಿ ಬೆಳಗಿದ ಮಹಿಳೆ ತಟ್ಟೆಗೆ ಹಣ ಹಾಕಿದ ಆರೋಪದಡಿ ಯತ್ನಾಳ ವಿರುದ್ಧ ನೀತಿ ಸಂಹಿತೆ ಕೇಸ್ ದಾಖಲಾಗಿತ್ತು. ವಿಜಯಪುರ ನಗರ ವಿಧಾನಸಭೆ ಚುನಾವಣೆ ಪ್ರಚಾರದ ಸಂದರ್ಭದಲ್ಲಿ ಆರತಿ ತಟ್ಟೆಯಲ್ಲಿ ಹಣ ಹಾಕುವ ಮೂಲಕ ಮತದಾರರಿಗೆ ಆಮಿಷ ಒಡ್ಡಿದ್ದಾರೆ. ಇದು ನೀತಿ ಸಂಹಿತೆ ಉಲ್ಲಂಘನೆ ಎಂದು ವಿಜಯಪುರ ಜಲನಗರ ಠಾಣೆಯಲ್ಲಿ ಚುನಾವಣಾ ಅಧಿಕಾರಿಗಳು ಪ್ರಕರಣ ದಾಖಲಿಸಿದ್ದರು. 2018 ಏ.20 ರಂದು ನಾಮಪತ್ರ ಸಲ್ಲಿಕೆ ವೇಳೆ ಬಿಜೆಪಿ ಅಭ್ಯರ್ಥಿ ಯಾಗಿದ್ದ ಯತ್ನಾಳ ಮೆರವಣಿಗೆ ಯಲ್ಲಿ ತಮಗೆ ಆರತಿ ಎತ್ತಿದ ಮಹಿಳೆಯ ತಟ್ಟೆಯಲ್ಲಿ 100 ರೂ. ನಗದು ಹಾಕಿದ್ದರು ಎಂದು ಆರೋಪಿಸಲಾಗಿತ್ತು. ಈ ಕುರಿತು ತಡವಾಗಿ ಏ.27ರಂದು ಚುನಾವಣಾ ಆಯೋಗ ಪ್ರಕರಣ ದಾಖಲಿಸಿತ್ತು. ಅಲ್ಲದೆ ಆರತಿ ತಟ್ಟೆಯಲ್ಲಿನ ನೋಟುಗಳನ್ನು ಸಹ ವಶಪಡಿಸಿಕೊಂಡಿರಲಿಲ್ಲ. ಆರತಿ ತಟ್ಟೆಯಿಂದ ಹಣ ಪಡೆದ ಮಹಿಳೆ ವಿಜಯಪುರ ವಿಧಾನಸಭೆ ಕ್ಷೇತ್ರದ ಮತದಾರಳು ಎಂಬುದನ್ನೂ ಚುನಾವಣಾ ಆಯೋಗ ಸಾಬೀತು ಪಡಿಸಿಲ್ಲ. ಈ ಎಲ್ಲ ಕಾರಣಗಳಿಂದ ಅ.31 ರಂದು ಯತ್ನಾಳ ಅವರನ್ನು ಸಾಕ್ಷಾಧಾರಗಳ ಕೊರತೆ ಕಾರಣ ನ್ಯಾಯಾಲಯ ಖುಲಾಸೆಗೊಳಿಸಿದೆ.